# Bangalore
# Regional News
# 31.03.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ರಾಜ್ಯಾದ್ಯಂತ ಇಂದು ಈದ್ ಉಲ್ ಫಿತರ್ ಆಚರಣೆ; ಮುಸ್ಲಿಂ ಬಾಂಧವರಿಂದ ವಿಶೇಷ ಪ್ರಾರ್ಥನೆ; ಗಣ್ಯರಿಂದ ಶುಭಾಶಯ

೨. ಪೊಲೀಸ್ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ರಾಜ್ಯದ ೧೯೭ ಪೊಲೀಸ್ ಸಿಬ್ಬಂದಿಗೆ ೨೦೨೪ನೇ ಸಾಲಿನ ಮುಖ್ಯಮಂತ್ರಿ ಪದಕ ಪ್ರಕಟ

೩. ಇಂದು ಭಾರತದ ಮೂರನೇ ಸೇನಾ ದಂಡನಾಯಕ ಜನರಲ್ ತಿಮ್ಮಯ್ಯ ಅವರ ೧೧೯ ನೇ ಜನ್ಮದಿನಾಚರಣೆ

೪. ಏಪ್ರಿಲ್ ೩ ಮತ್ತು ೪ ರಂದು ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆ ಸಾಧ್ಯತೆ; ಯೆಲ್ಲೋ ಅಲರ್ಟ್ ಘೋಷಿಸಿದ ಹವಾಮಾನ ಇಲಾಖೆ

**<><*<><>*><>**

ದೇಶಾದ್ಯಂತ ಇಂದು ಈದ್ ಉಲ್ ಫಿತರ್ - ರಂಜಾನ್ ಅನ್ನು ಆಚರಿಸಲಾಗುತ್ತಿದೆ. ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮುಸ್ಲೀಂ ಬಾಂಧವರು ಬೆಳಗ್ಗೆಯಿಂದಲೇ ಮಸೀದಿಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡರು. ೨೯ ದಿನಗಳ ಉಪವಾಸದ ನಂತರ ಭಾನುವಾರ ರಾತ್ರಿ ಚಂದ್ರದರ್ಶನವಾದ ಕಾರಣ ನಿಯಮದಂತೆ ಇಂದು ಬೆಳಗ್ಗೆ ರಂಜಾನ್ ಹಬ್ಬದ ವಿಶೇಷ ಪ್ರಾರ್ಥನೆ ಸಲ್ಲಿಸಲು ಇಸ್ಲಾಂ ಧರ್ಮಗುರುಗಳು ನಿರ್ಧರಿಸಿ, ಉಪವಾಸವನ್ನು ಅಂತ್ಯಗೊಳಿಸಿದ್ದಾರೆ. ರಂಜಾನ್ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ದ್ವೇಷಾಸೂಯೆಗಳನ್ನು ಸುಟ್ಟು ಪ್ರೀತಿ, ಬಾಂಧವ್ಯಗಳನ್ನು ಬೆಸೆಯುವ ಪವಿತ್ರ ಈದ್ - ಉಲ್ - ಫಿತರ್ ಹಬ್ಬದ ಸಂದೇಶ ಮನುಕುಲದ ಹಾದಿಗೆ ದಾರಿದೀಪವಾಗಲಿ, ನಾಡಲ್ಲಿ ಸುಖ, ಶಾಂತಿ, ಸಮೃದ್ಧಿ ನೆಲೆಸಲಿ ಎಂದು ಹಾರೈಸಿದ್ದಾರೆ. ರಂಜಾನ್ ಹಬ್ಬದ ಹಿನ್ನಲೆಯಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ವಿವಿಧ ಈದ್ಗಾ ಮೈದಾನಗಳಲ್ಲಿ ಮತ್ತು ಮಸೀದಿಗಳಲ್ಲಿ ಸಾಮೂಹಿಕವಾಗಿ ವಿಶೇಷ ಪ್ರಾರ್ಥನೆ ಮಾಡಲಾಯಿತು. ಮುಂಜಾನೆಯಿಂದಲೇ ವಿಶೇಷ ಪ್ರಾರ್ಥನೆಯ ನಂತರ ಮುಸ್ಲಿಂ ಸಮುದಾಯದವರು ಪರಸ್ಪರ ಶುಭಾಶಯ ವಿನಿಯಮ ಮಾಡಿಕೊಂಡರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ನೆಲಮಂಗಲ, ಹೊಸಕೋಟೆ ಹಾಗೂ ದೇವನಹಳ್ಳಿ ತಾಲೂಕುಗಳಲ್ಲೂ ಪವಿತ್ರ ರಂಜಾನ್ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮುಸ್ಲಿಂ ಬಾಂಧವರು ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ, ಧಾರ್ಮಿಕ ಸಂಪ್ರದಾಯಗಳನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲೆಯ ದೊಡ್ಡಬಳ್ಳಾಪುರದ ಸಿಕಂದರ್ ಶಾ ಈದ್ಗಾ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಸಹಸ್ರಾರು ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಪ್ರಾರ್ಥನೆಯ ಬಳಿಕ ಜಾತಿ ಧರ್ಮ ಭೇದವಿಲ್ಲದೆ ಜಕಾತ್ ನೀಡುವುದು ಈ ಹಬ್ಬದ ವಿಶೇಷತೆಯಾಗಿದ್ದು, ಅದರಂತೆ ಮುಸ್ಲಿಂ ಬಾಂಧವರು ಪ್ರಾರ್ಥನೆ ನಂತರ ದಾನ ಧರ್ಮದಲ್ಲಿ ನಿರತರಾಗಿದ್ದರು. ರಮ್ಜಾನ್ ಹಿನ್ನೆಲೆಯಲ್ಲಿ ವಿಜಯಪುರದ ಜೋಡ ಗುಮ್ಮಟ, ಬೃಹತ್ ಜುಮ್ಮಾ ಮಸೀದಿ,

ಇದಗಾ ಮೈದಾನ ಸೇರಿದಂತೆ ನಗರದ ವಿವಿಧ ಮಸೀದಿಗಳಲ್ಲಿ ಸಾಮೂಹಿಕವಾಗಿ ಪ್ರಾರ್ಥನೆ ಸಲ್ಲಿಸಲಾಯಿತು. ರಂಜಾನ್ ಹಬ್ಬ ಆಚರಣೆ ಹಿನ್ನೆಲೆ ಮಲೆನಾಡು ಶಿವಮೊಗ್ಗ ಜಿಲ್ಲಾದ್ಯಂತ ಸಡಗರ ಸಂಭ್ರಮದಿಂದ ಇಂದು ಆಚರಿಸಲಾಯಿತು. ಹೊಸ ಉಡುಪು ತೊಟ್ಟ ಮುಸ್ಲಿಂ ಬಾಂಧವರು ಈದ್ಗಾ ಮೈದಾನಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಜಿಲ್ಲಾಧಿಕಾರಿ ಕಚೇರಿ ಎದುರು ಇರುವ ಈದ್ಗಾ ಮೈದಾನದಲ್ಲಿ ಸಾವಿರಾರು ಜನರು ಪ್ರಾರ್ಥನೆಯಲ್ಲಿ ಪಾಲ್ಗೊಂಡಿದ್ದರು. ಹಾವೇರಿ ಜಿಲ್ಲೆಯಾದ್ಯಂತ ಈದ್ ಉಲ್ ಫಿತರ್ ಹಬ್ಬವನ್ನು ಮುಸ್ಲಿಂ ಸಮುದಾಯದವರು ಇಂದು ಸಡಗರ ಸಂಭ್ರಮದಿಂದ ಆಚರಿಸಿದರು. ಹಬ್ಬದ ಹಿನ್ನೆಲೆ ವಿಶೇಷ ಪ್ರಾರ್ಥನೆ ಸಲ್ಲಿಸಿದ ಅವರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಪ್ರಾರ್ಥನಾ ಸ್ಥಳಗಳು ಹಾಗೂ ಮಸೀದಿಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ಕೋಲಾರ - ಬೆಂಗಳೂರು ರಸ್ತೆಯಲ್ಲಿರುವ ಈದ್ಗಾ ಮೈದಾನ ಹಾಗೂ ಕೋಲಾರ - ಚಿಕ್ಕಬಳ್ಳಾಪುರ ರಸ್ತೆಯಲ್ಲಿರುವ ಸಂಗೊಂಡಹಳ್ಳಿ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಹಸಿವು ಮತ್ತು ದಾನ ಧರ್ಮದ ಮಹತ್ವವನ್ನು ಸಾರುವ ಈದುಲ್ ಫಿತರ್ ಹಬ್ಬವನ್ನು ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸುವ ಮೂಲಕ ಸಹಸ್ರಾರು ಮುಸ್ಲಿಂ ಬಾಂಧವರು ಮೈಸೂರಿನ ಮಸೀದಿಗಳು ಮತ್ತು ಈದ್ಗಾ ಮೈದಾನದಲ್ಲಿ ಆಚರಿಸಿದರು.

<><*<><>*><>

ಹಿಂದೂ ಮತ್ತು ಮುಸ್ಲಿಂ ಬಾಂಧವರು ಸಹೋದರತ್ವ ಭಾವನೆಯಿಂದ ಒಟ್ಟಾಗಿ ಬಾಳುವಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಕರೆ ನೀಡಿದ್ದಾರೆ. ತುಮಕೂರು ನಗರದಲ್ಲಿ ರಂಜಾನ್ ಪ್ರಾರ್ಥನೆಯಲ್ಲಿ ಭಾಗವಹಿಸಿದ ನಂತರ ಮಾತನಾಡಿದ ಅವರು ೭ನೇ ಶತಮಾನದಲ್ಲಿ ಪ್ರವಾದಿ ಮಹಮದ್ ಪೈಂಗಬರರು ಇಡೀ ವಿಶ್ವಕ್ಕೆ ಸಹೋದರತ್ವದ ಮತ್ತು ಶಾಂತಿಯ ಸಂದೇಶ ಸಾರಿದ್ದಾರೆ. ಈ ಸಂದೇಶವನ್ನು ಎಲ್ಲರೂ ಪಾಲಿಸುವ ಭರವಸೆ ಇದೆ ಎಂದರು. ನಿನ್ನೆ ಯುಗಾದಿ ಹಬ್ಬ ಸಹ ಆಚರಣೆಯಾಗಿದೆ. ಯುಗಾದಿ ಮತ್ತು ರಂಜಾನ್ ಎರಡೂ ಹಬ್ಬಗಳು ಒಂದೇ ಸಮಯಕ್ಕೆ ಬಂದಿದ್ದು, ಇದು ಸಹೋದರತ್ವದೆಡೆಗೆ ನಾವೆಲ್ಲರೂ ಸಾಗಲು ದೇವರು ನೀಡಿದ ಒಂದು ಸೂಚನೆಯಾಗಿದೆ ಎಂದು ಹೇಳಿದರು. ಈ ವೇಳೆ ಮಾಜಿ ಶಾಸಕರಾದ ಶಫೀ ಅಹಮದ್, ರಫೀಕ್ ಅಹಮದ್, ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಪಾಲಿಕೆ ಆಯುಕ್ತರಾದ ಬಿ.ವಿ.ಅಶ್ವಿಜ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

<><*<><>*><>

ಈ ನಡುವೆ ವಕ್ಫ್ ಮತ್ತು ಪ್ರವಾಸೋದ್ಯಮ ಸಚಿವ ಜಮೀರ್ ಅಹಮದ್ ಖಾನ್ ಮತ್ತು ಸ್ಥಳೀಯ ಆಡಳಿತ ಮತ್ತು ಹಜ್ ಸಚಿವ ಕೆ.ರೆಹಮಾನ್ ಖಾನ್, ವಕ್ಫ್ ತಿದ್ದುಪಡಿ ಕಾಯ್ದೆ -೨೦೨೪ ರ ವಿರುದ್ಧ ಅಸಮಾಧಾನ ಹೊರ ಹಾಕಿದ್ದು, ಕಪ್ಪು ಪಟ್ಟಿ ಧರಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಜಮೀರ್ ಅಹಮದ್ ಖಾನ್, ವಕ್ಫ್ ಕಾಯ್ದೆ, ಬ್ರಿಟೀಷರ ಕಾಲದಲ್ಲೇ ಜಾರಿಯಾದ ಕಾಯ್ದೆಯಾಗಿದ್ದು, ಕೇಂದ್ರ ಸರ್ಕಾರ ನೂತನ ತಿದ್ದುಪಡಿ ಕಾಯ್ದೆಯನ್ನು ಜಾರಿಗೊಳಿಸದಿರಲು ಈ ಮೂಲಕ ಆಗ್ರಹಿಸಲಾಗುತ್ತಿದೆ. ರಾಜ್ಯ ಸರ್ಕಾರ ಈ ಕುರಿತಂತೆ ಈಗಾಗಲೇ ತನ್ನ ನಿಲುವು ಸ್ಪಷ್ಟಪಡಿಸಿದ್ದು, ಕಳೆದ ವಿಧಾನಸಭಾ ಅಧಿವೇಶನದಲ್ಲಿ ಈ ಕಾಯ್ದೆಗೆ ಬೆಂಬಲ ಸೂಚಿಸದಿರಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಪೊಲೀಸ್ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ರಾಜ್ಯದ ೧೯೭ ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ೨೦೨೪ನೇ ಸಾಲಿನ ಮುಖ್ಯಮಂತ್ರಿ ಪದಕಗಳನ್ನು ಪ್ರಕಟಿಸಲಾಗಿದೆ. ಈ ಬಾರಿ ತೀರ್ಥಹಳ್ಳಿಯ ಇಬ್ಬರು ಅಧಿಕಾರಿಗಳಿಗೆ ಈ ಸಾಲಿನ ಮುಖ್ಯಮಂತ್ರಿಗಳ ಪದಕ ಲಭಿಸಿದೆ. ತೀರ್ಥಹಳ್ಳಿ ಡಿವೈಎಸ್ಪಿ ಅರವಿಂದ ಎನ್. ಕಲಗುಜ್ಜಿ ಹಾಗೂ ಮಾಳೂರು ಸಿಪಿಐ ಶ್ರೀಧರ್ ಸಿಎಂ ಪದಕಕ್ಕೆ ಭಾಜನರಾಗಿದ್ದಾರೆ. ದಾವಣಗೆರೆ ಜಿಲ್ಲೆ ನ್ಯಾಮತಿ ತಾಲೂಕಿನ ಎಸ್‌ಬಿ ಐ ಬ್ಯಾಂಕಿನಲ್ಲಿ ಕಳೆದ ಐದು ತಿಂಗಳ ಹಿಂದೆ ನಡೆದಿದ್ದ ಬಹುಕೋಟಿ ಬಂಗಾರ ದರೋಡೆ ಪ್ರಕರಣವನ್ನು ಭೇದಿಸಿರುವ ತಿನಿಖಾ ತಂಡಕ್ಕೆ ಮುಖ್ಯಮಂತ್ರಿಗಳ ಪದಕ ಘೋಷಿಸಲಾಗಿದೆ ಎಂದು ಪೂರ್ವ ವಲಯ ಐಜಿಪಿ ಡಾ.ರವಿಕಾಂತೇಗೌಡ ತಿಳಿಸಿದ್ದಾರೆ. ವಶಪಡಿಸಿಕೊಂಡ ೧೩ ಕೋಟಿ ರೂಪಾಯಿ ಮೌಲ್ಯದ ೧೭ ಕೆಜಿ ಬಂಗಾರದ ಆಭರಣಗಳ ಪ್ರದರ್ಶನ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಥಳೀಯರು ಸೇರಿದಂತೆ ೬ ಜನರನ್ನು ಬಂಧಿಸಲಾಗಿದೆ ಎಂದು ಹೇಳಿದರು. ಪೊಲೀಸ್ ಇಲಾಖೆಗೆ ತೀವ್ರ ಸವಾಲಾಗಿದ್ದ ಪ್ರಕರಣವನ್ನು ಪತ್ತೆಹಚ್ಚಲು ದೇಶದ ವಿವಿಧ ರಾಜ್ಯಗಳಿಗೆ ತನಿಖಾ ತಂಡ ತೆರಳಿತ್ತು.

<><*<><>*><>

ಭಾರತದ ಮೂರನೇ ಸೇನಾದಂಡ ನಾಯಕರಾಗಿದ್ದ ಜನರಲ್ ತಿಮ್ಮಯ್ಯ ಅವರ ೧೧೯ ನೇ ಜನ್ಮದಿನಾಚರಣೆಯನ್ನು ಮಡಿಕೇರಿಯಲ್ಲಿಂದು ಅರ್ಥಪೂರ್ಣವಾಗಿ ಆಚರಿಸಲಾಯಿತು. ಜನರಲ್ ತಿಮ್ಮಯ್ಯ ಅವರ ಜನ್ಮನಿವಾಸ ಸನ್ನಿಸೈಡ್ ನಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ತಿಮ್ಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಉಪವಿಭಾಗಾಧಿಕಾರಿ ವಿನಾಯಕ ನರ್ವಾಡೆ, ತಿಮ್ಮಯ್ಯ ಅವರ ಜೀವನ ಪ್ರತಿಯೊಬ್ಬರಿಗೂ ಆದರ್ಶಪ್ರಾಯವಾಗಿದೆ ಎಂದು ಸ್ಮರಿಸಿದರು. ಭಾರತೀಯ ಸೇನಾ ದಂಡನಾಯಕರಾಗಿ ಸೇವೆ ಸಲ್ಲಿಸಿದ್ದ ಹೆಮ್ಮೆಯ ಕನ್ನಡಿಗ, ಪದ್ಮಭೂಷಣ ಪುರಸ್ಕೃತ ಜನರಲ್ ಕೆ.ಎಸ್.ತಿಮ್ಮಯ್ಯ ಅವರ ಜನ್ಮದಿನದಂದು ಅವರಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗೌರವಪೂರ್ವಕ ನಮನ ಸಲ್ಲಿಸಿದ್ದಾರೆ.

<><*<><>*><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ದೇಶದ ಮುಂದಿನ ಪೀಳಿಗೆಯ ವಿಎಫ್‌ಎಕ್ಸ್ ಕಲಾವಿದರನ್ನು ಸಿದ್ಧಪಡಿಸಲು ಡಬ್ಲ್ಯೂಎಫ್‌ಎಕ್ಸ್ ಸೆಮಿನಾರ್ ಸರಣಿ ಆರಂಭಿಸಿದೆ. ಡಬ್ಲ್ಯೂಎಫ್‌ಎಕ್ಸ್ ೨೦೨೬ ರಲ್ಲಿ ಸ್ಪರ್ಧಿಸಲು ದೇಶದ ಅಗ್ರ ವಿಎಫ್‌ಎಕ್ಸ್ ಪ್ರತಿಭೆಗಳಿಗಾಗಿ ಬೆಂಗಳೂರು, ಚಂಡೀಗಢ, ಮುಂಬೈ ಮತ್ತು ಕೊಲ್ಕತ್ತಾದಲ್ಲಿ ಏಪ್ರಿಲ್ ಮಧ್ಯಭಾಗದಲ್ಲಿ ವಲಯವಾರು ಅಂತಿಮ ಸ್ಪರ್ಧೆ ನಡೆಯಲಿದ್ದು, ವೇವ್ಸ್ ಗ್ರ್ಯಾಂಡ್ ಫಿನಾಲೆ ಮೇ ಒಂದರಿಂದ ಮುಂಬೈನ ಜಿಯೋ ವರ್ಲ್ಡ್‌ನಲ್ಲಿ ನಡೆಯಲಿದೆ.

<><*<><>*><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿಂದು ಹಗುರ ಮಳೆಯಾಗಿದ್ದು, ಪ್ರಮುಖವಾಗಿ ಧಾರವಾಡದಲ್ಲಿ ೨ ಸೆಂಟಿಮೀಟರ್ ಮಳೆಯಾಗಿದೆ. ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ ೩೨ ಡಿಗ್ರಿ ಸೆಲ್ಸಿಯಸ್ ಹಾಗೂ ಕಲಬುರಿಗಿಯಲ್ಲಿ ೪೧ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಮುಂದಿನ ಮೂರು ದಿನಗಳು ರಾಜ್ಯದ ಕೆಲವೆಡೆ ಗುಡುಗು-ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಏಪ್ರಿಲ್ ೩ ಹಾಗೂ ೪ ರಂದು ಕರಾವಳಿ ಹಾಗೂ ಉತ್ತರ ಮತ್ತು ದಕ್ಷಿಣ ಒಳನಾಡಿನ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ಆಕಾಶವಾಣಿಗೆ ಮಾಹಿತಿ ನೀಡಿರುವ ಬೆಂಗಳೂರು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್.ಪಾಟೀಲ್, ರಾಜ್ಯದ ಹಲವೆಡೆ ಗುಡುಗು-ಮಿಚು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಕೊಡಗು,

ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಏಪ್ರಿಲ್ ೩ ಹಾಗೂ ೪ ರಂದು ಈ ಜಿಲ್ಲೆಗಳಿಗೆ ಎಲ್ಲೋ ಅಲರ್ಟ್ ಘೋಷಿಸಲಾಗಿದೆ. ಆ ದಿನಗಳಂದು ಕೆಲವೆಡೆ ಆಲಿಕಲ್ಲು ಮಳೆಯಾಗುವ ಸಂಭವವಿದೆ. ರಾಜ್ಯಾದ್ಯಂತ ಏಪ್ರಿಲ್ ೨ ರಿಂದ ೫ ರವರೆಗೆ ಉಷ್ಣತೆ ಮೂರರಿಂದ ನಾಲ್ಕು ಡಿಗ್ರಿ ಸೆಲ್ಸಿಯಸ್ ಇಳಿಮುಖವಾಗುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ.

ಧ್ವನಿ: ಸಿ.ಎಸ್.ಪಾಟೀಲ್ ( ೩೩ ಸೆಕೆಂಡ್ಸ್ )

**<><*<><>*><>**

ಉತ್ತರಕನ್ನಡ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಮಹಿಳಾ ಕೆಲಸಗಾರರು ಭಾಗವಹಿಸುವಿಕೆ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಾಳೆಯಿಂದ ಜೂನ್ ೩೦ರ ವರೆಗೆ ಸ್ತ್ರೀ ಚೇತನ ಎಂಬ ವಿಶೇಷ ಅಭಿಯಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕಾಂದೂ ತಿಳಿಸಿದ್ದಾರೆ. ಅಭಿಯಾನದ ಕುರಿತು ಮಾಹಿತಿ ನೀಡಿರುವ ಅವರು, ಈ ಅಭಿಯಾನದ ವೇಳೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸ್ತ್ರೀ ಚೇತನ ಅಭಿಯಾನದಡಿ ಮಹಿಳಾ ಕೂಲಿ ಕಾರ್ಮಿಕರಿಗೆ ಸಮಾನ ಅವಕಾಶ, ಸಮಾನ ದಿನಗೂಲಿ, ನೇರ ನಗದು ವರ್ಗಾವಣೆ ವೇತನ ಪದ್ಧತಿ, ವೈಯಕ್ತಿಕ ಮತ್ತು ಸಮುದಾಯ ಸೌಲಭ್ಯಗಳು, ಗರ್ಭಿಣಿಯರು, ವಿಶೇಷಚೇತನರು ಮತ್ತು ಹಿರಿಯ ನಾಗರಿಗೆ ಕೆಲಸದಲ್ಲಿ ರಿಯಾಯತಿ, ಶಿಶುಗಳ ಆರೈಕೆಗಾಗಿ ಕೂಸಿನ ಮನೆ, ಜೀವ ವಿಮೆ ಸೇರಿದಂತೆ ಹಲವು ಲಾಭದಾಯಕ ಅಂಶಗಳ ಕುರಿತು ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**